## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರುಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

dt. 17-07-2021

ಸಂಖ್ಯೆ: w-136/Committee/Proceding -19/2021-22

### ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡ ಮಾನ್ಯ ನೋಡಲ್ ಅಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

### ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಗಳ ಅನುಷ್ಠನದ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸಭೆಯನ್ನು ಪ್ರಾರಂಭಿಸಲಾಯಿತು

ಸಭೆಯಲ್ಲಿ ಹಾಜರಾಗಿದ್ದ ಸಮಿತಿ ಸದಸ್ಯರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ 2008-09 ರ ಹಿಂದಿನ ಬಾಕಿ ಪಾವತಿಸಿಕೊಳ್ಳುದಿರುವ ಹಾಗೂ ಕಂದಾಯ ಪಾವತಿಸಲು ಕ್ರಮದ ಬಗ್ಗೆ ಸಭೆಯ ವಿವರಣೆಯನ್ನು ಕೋರಿದರು

ಅಧ್ಯಕ್ಷರು ಕಂದಾಯ ಪರಿವೀಕ್ಷಕರಿಗೆ ವಾರ್ಡ್ ಬಗ್ಗೆ ವಿವರಣೆ ನೀಡುವಂತೆ ಸೂಚಿಸಿದರು.

ಕಂದಾಯ ಪರಿವೀಕ್ಷಕರು ಸದರಿ ವಿಷಯದ ಬಗ್ಗೆ 2008-09 ಹಿಂದಿನ ತೆರಿಗೆ ಪಾವ ಮತ್ತು **Khatha Extract and Khatha Certificate** ನೀಡುವುದನ ತಡೆಯಿಡಿದಿರುವ ಬಗ್ಗೆ ಸಭೆಯಲ್ಲಿ ವಿವರಣೆಯನ್ನು ನೀಡಿ ಆಯುಕ್ತರ ಆದೇಶ ಪ್ರತಿಯನ ಸಭೆಯಲ್ಲಿ ಪ್ರದರ್ಶಿಸಿದರು.

ಮುಂದುವರೆದು 2008-09 ರಿಂದ 2021-22 ರವರಗಿನ ತೆರಗೆಯನ್ನು ಪಾವತಿಸಿಕೊಳ್ಳುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರು ವಾಡ್-136 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-136 ರವರುಗಳಿಗೆ ಕೋವಿಡ್-19 ಸೊಂಕಿನ ಬಗ್ಗೆ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಆರೋಗ್ಯ ಪರಿವೀಕ್ಷಕರು ವಾರ್ಡ್ 136ರ ವ್ಯಾಪ್ತಿಯಲ್ಲಿ ಕೋವಿಡ್-19 ಸೊಂಕಿತರ ಸಂಖ್ಯೆ ಪೂರ್ಣ ಪ್ರಮಾಣದಲ್ಲಿ ಕಡಿಮೆಯಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ವಾರ್ಡ್ 136ರ ವ್ಯಾಪ್ತಿಯಲ್ಲಿ ಜೆ.ಜೆ.ಆರ್ ನಗರ ಉದ್ಯಾನವನ ಹಾಗೂ ದೇವರಾಜ್ ಅರಸುನಗರ ಸಮೂದಾಯ ಭವನಗಳಲ್ಲಿ ಹಾಗೂ ಎನ್.ಜಿ.ಓ ಗಳಿಂದ ಕೊಳಚೆ ಪ್ರದೇಶದ ನಿವಾಸಿಗಳಿಗೆ ಶಿಬಿರಗಳನ್ನು ಸ್ಥಾಪಿಸಿ 18 ವರ್ಷ ಮೇಲ್ಪಟ್ಟವರಿಗೆ ಹಾಗೂ 45 ವರ್ಷ ಮೇಲ್ಪಟ್ಟವರಿಗೆ ಲಸಿಕೆ ಲಭ್ಯತೆಯಂತೆ ಲಸಿಕೆ ನೀಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಲಸಿಕೆ ನೀಡುವ ಸ್ಥಳಗಳಲ್ಲಿ ಭೂತ್ ಮಟ್ಟದ ಅಧಿಕಾರಿಗಳನ್ನು ಉಸ್ತುವಾರಿ ನೀಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುತ್ತೀರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

----3

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್- 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬೆಸ್ಕಂ ಅಧಿಕಾರಿಯವರು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಕಮಿಟಿ ಸದಸ್ಯರು ವಾರ್ಡ್ 136ರ ವ್ಯಾಪ್ತಿಯಲ್ಲಿ ಬರುವ ಹೆಚ್. ಬಿ. ಜಿ ಮುಖ್ಯ ರಸ್ತೆಯಲ್ಲಿ ಕಟ್ಟಡ ತ್ಯಾಜ್ಯವನ್ನು ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು ಸಂಚಾಲಕರು ಹಾಗೂ ಸಹಾಯಕ ಅಭಿಯಂತರ ರವರನ್ನು ವಿಷಯದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಈ ಬಗ್ಗೆ ನಮ್ಮ ಗಮನಕ್ಕೂ ಸಹ ಸದರಿ ವಿಷಯವು ಬಂದಿದ್ದು ಸದರಿ ಸ್ಥಳಗಳಲ್ಲಿ ಕಟ್ಟಡ ತ್ಯಾಜ್ಯ ಎಸೆಯುವವರ ಬಗ್ಗೆ ನಿಗವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಿ ಬಿ.ಬಿ.ಎಂ.ಪಿ ನಿಯಮನುಸಾರ ಕ್ರಮ ಕೈಗೊಳ್ಳು ಸಭೆಯಲ್ಲಿ ಹಾಜರಾಗಿದ್ದ ಮಾರ್ಷಲ್‌ಗಳಿಗೆ ಸೂಚಿಸಿದರು.

ಸಭೆಯಲ್ಲಿ ಹಾಜರಾಗಿರುವ ಸಮಿತಿ ಸದಸ್ಯರಾದ ಶ್ರೀ ಮೊಹಮದ್ ಮುಜಾಮೀಲ್ ಮತ್ತು ಉಮೇಶ್ ರವರು ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ಗುತ್ತಿಗೆದಾರರು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸದಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಿನ ಪ್ರಮಾಣದಲ್ಲಿ ಬರುತ್ತೀರುವ ಸಭೆಯಲ್ಲಿ ವಿಷಯ ಮಂಡನೆ ಮಾಡಿದರು

ಸದರಿ ವಿಷಯದ ಬಗ್ಗೆ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರನ್ನು ಸಭೆಗೆ ವಿವರಣೆ ನೀಡುವಂತೆ ಹಾಗೂ ಪೂರ್ಣ ಮಾಹಿತಿಯನ್ನು ನೀಡಲು ಸೂಚಿಸಿದರು

ಕಿರಿಯ ಆರೋಗ್ಯ ಪರೀವಿಕ್ಷಕರಾದ ಎನ್. ಲಕ್ಷ್ಮಿ ನರಸಿಂಹಯ್ಯ ರವರು **Modefied work Order-2: EE-1/SWM-1/WO/107/2020-21 dated 09-06-2021**ಕಾರ್ಯದೇಶ ಪಡೆದು ಕಾರ್ಯ ನಿರ್ವಹಿಸುತ್ತಿರುವ ಶ್ರೀ ಸತೀಶ್ ಕುಮಾರ್ ಸಿ.ಎಂ. ಮಾಲಿಕರು ಮೇ॥ ಸಿ.ಪಿ.ಟಿ ಎಂಟರ್ ಪ್ರೈಸಸ್ ರವರ ಕಾರ್ಯದಕ್ಷತೆಯ ಬಗ್ಗೆ ಸಾರ್ವಜನಿಕರು ಅಸಮಾದನಗೊಂಡು ಹಲವು ಸಲ ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾನಿ), ಚಾಮರಾಜಪೇಟೆ ವಿಭಾಗದವರಿಗೆ ಹಾಗೂ ಮಾನ್ಯ ಶಾಸಕರು ಚಾಮರಾಜಪೇಟೆ ರವರಿಗೆ ದೂರುಗಳನ್ನು ಸಭೆಯಲ್ಲಿ ತಿಳಿಸಿದರು.

ನಿರ್ಣಯ: ಸಭೆಯಲ್ಲಿ ಹಾಜರಾಗಿದ್ದು ಎಲ್ಲಾರು ಘನತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕಾರ್ಯವು ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ತುರ್ತು ಕಾಮಗಾರಿಯಾಗಿರುವುದರಿಂದ ಸದರಿ ವಿಷಯದ ಬಗ್ಗೆ ಚರ್ಚಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾನಿ) ಚಾಮರಾಜಪೇಟೆರವರಿಗೆ ಸಂಬಂಧಿಸಿದ ಕಡತಗಳೊಂದಿಗೆ ಮುಂದಿನ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಳ್ಳಲು ಮುಂದಿನ ಸಭೆಗೆ ಹಾಜರಾಗುವಂತೆ ಸೂಚಿಸಿ ನಿರ್ಣಯ ಕೈಗೊಳ್ಳಲಾಯಿತು.

ಸಭೆಯಲ್ಲಿ ಹಾಜರಾಗಿರುವ ಸಮಿತಿ ಸದಸ್ಯರಾದ ಶ್ರೀ ಮೊಹಮದ್ ಮುಜಾಮೀಲ್ ಮತ್ತು ಉಮೇಶ್ ರವರು ವಾರ್ಡ್ 136ರ ವ್ಯಾಪ್ತಿಯಲ್ಲಿ ಚಿಕನ್ ವೇಸ್ಟ್ ಪೂರ್ತಿ ರಸ್ತೆ ಬದಿಯಲ್ಲಿ ಬಿದ್ದಿದ್ದು ನಾಯಿಗಳು ಸದರಿ ಕಸವನ್ನು ರಸ್ತೆಗಳಲ್ಲಿ ತಿಂದು ಸಾರ್ವಜನಿಕರಿಗೆ ಹಾನಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೋದಲು ಚಿಕನ್ ವೇಸ್ಟ್‌ಗಳನ್ನು ಅಂಗಡಿಗಳಿಂದ ಶೇಖರಣೆ ಮಾಡಿ ವಿಲೇವಾರಿ ಮಾಡುತ್ತಿದ್ದ ಸಂಸ್ಥೆಯ ಬಿ.ಬಿಎಂ.ಪಿಯೊಂದಗಿನ ಒಡಂಬಡಿಕೆ ಅವಧಿ ಮುಕ್ತಯಗೊಂಡಿರುವುದರಿಂದ ಸದರಿ ಸಂಸ್ಥೆಯ ಚಿಕನ್ ವೇಸ್ಟ್ ಶೇಖರಣೆ ಮಾಡಿ ವಿಲೇವಾರಿ ಮಾಡದೇ ಇರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ನಿರ್ಣಯ: ಸದರಿ ವಿಷಯವನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾವಿ) ಚಾಮರಾಜಪೇಟೆ ರವರ ಗಮನಕ್ಕೆ ತಂದು ಮೇಲಾಧಿಕಾರಿಗಳಿಗೆ ಪತ್ರವನ್ನು ಬರೆಯಲು ಸೂಚಿಸಿ ನಿರ್ಣಯ ಮಂಡಿಸಲಾಯಿತು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೂಡಲ್ ಅಧಿಕಾರಿ | 17/07/20 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |

| | | | |
|---|---|---|---|
| 7 | ಶ್ರೀ ಮೊಹಮದ್ ಮುಜಾಮೀಲ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720 ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

17/07/2021
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮೀತಿ

17/7/2021
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

<u>ಪ್ರತಿಯನ್ನು</u>

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ